**O.S.**–212/2022

**ಪಿ.ಡಬ್ಲ್ಯು.– 1**

**ದಿನಾಂಕಃ 04.07.2025 ರಂದು ಕರೆಯಿಸಿ ಪ್ರಮಾಣ ವಚನ ಭೋಧಿಸಲಾಯಿತು**

**ಮುಖ್ಯ ವಿಚಾರಣೆಃ ವಾದಿ ಪರ ಎಂ.ಎಸ್.ಜಿ. ವಕೀಲರಿಂದ**

ನಾನು ನನ್ನ ಪ್ರಮಾಣ ಪತ್ರವನ್ನು ಸಲ್ಲಿಸಿದ್ದು, ಅದರಲ್ಲಿ ಬರೆದಿರುವ ಎಲ್ಲಾ ವಿಷಯಗಳು ಸತ್ಯವಾಗಿರುತ್ತವೆ ಹಾಗೂ ಪ್ರಮಾಣ ಪತ್ರದಲ್ಲಿರುವ ಎಲ್ಲಾ ವಿಚಾರಗಳನ್ನು ನಾನು ನನ್ನ ವಕೀಲರಿಗೆ ತಿಳಿಸಿ ನನ್ನ ವಕೀಲರ ಮುಖಾಂತರ ಬರೆಸಿರುತ್ತೇನೆ ಹಾಗೂ ನನ್ನ ಸಹಿಯನ್ನು ಪ್ರಮಾಣ ಪತ್ರಕ್ಕೆ ಹಾಕಿರುತ್ತೇನೆ.

1. ದಿಃ16.05.1974 ರ ಹಿಸ್ಸಾ ಪತ್ರದ ದೃಢೀಕೃತ ನಕಲನ್ನು ಹಾಜರುಪಡಿಸಿದ್ದು, ಅದನ್ನು ನಿಪಿ 1 ಎಂದು ಗುರುತಿಸಲಾಯಿತು.
2. ಸರ್ವೇ ಸಂಖ್ಯೆ 142 ರ ನಕ್ಷೆಯ ದೃಢೀಕೃತ ನಕಲನ್ನು ಹಾಜರುಪಡಿಸಿದ್ದು, ಅದನ್ನು ನಿಪಿ 2 ಎಂದು ಗುರುತಿಸಲಾಯಿತು.
3. ಸರ್ವೇ ಸಂಖ್ಯೆ 142/1 ರ ಹದ್ದು ಬಸ್ತು ಅಳತೆ ನಕ್ಷೆಯ ದೃಢೀಕೃತ ನಕಲನ್ನು ಹಾಜರುಪಡಿಸಿದ್ದು, ಅದನ್ನು ನಿಪಿ 3 ಎಂದು ಗುರುತಿಸಲಾಯಿತು.
4. ಆಕಾರ್ ಬಂದ್ ಉತಾರೆಯ ದೃಢೀಕೃತ ನಕಲನ್ನು ಹಾಜರುಪಡಿಸಿದ್ದು, ಅದನ್ನು ನಿಪಿ 4 ಎಂದು ಗುರುತಿಸಲಾಯಿತು.
5. ಸರ್ವೇ ಸಂಖ್ಯೆ 142/1 ರ 2021–22 ನೇ ಸಾಲಿನ ಪಹಣಿ ಪತ್ರಿಕೆಯನ್ನು ಹಾಜರುಪಡಿಸಿದ್ದು, ಅದನ್ನು ನಿಪಿ 5 ಎಂದು ಗುರುತಿಸಲಾಯಿತು.
6. ಸರ್ವೇ ಸಂಖ್ಯೆ 142/1 ರ ಸರ್ವೇ ನೋಟೀಸ್ ನ ದೃಢೀಕೃತ ನಕಲನ್ನು ಹಾಜರುಪಡಿಸಿದ್ದು, ಅದನ್ನು ನಿಪಿ 6 ಎಂದು ಗುರುತಿಸಲಾಯಿತು.
7. ದಿಃ26.10.2021 ರ ಮೋಜಣಿದಾರರ ಸ್ಥಳ ಮಹಜರ್ ನ ದೃಢೀಕೃತ ನಕಲನ್ನು ಹಾಜರುಪಡಿಸಿದ್ದು, ಅದನ್ನು ನಿಪಿ 7 ಎಂದು ಗುರುತಿಸಲಾಯಿತು.

ಆದ್ದರಿಂದ ನನ್ನ ದಾವೆಯನ್ನು ಪುರಸ್ಕರಿಸಬೇಕಾಗಿ ವಿನಂತಿ.

**ಪಾಟೀ ಸವಾಲುಃ- ಪ್ರತಿವಾದಿಯು ಪ್ರತಿವಾದ ಪತ್ರವನ್ನು ಸಲ್ಲಿಸದ ಕಾರಣ ಪಾಟೀ ಸವಾಲನ್ನು ಇಲ್ಲವೆಂದು ತೆಗೆದುಕೊಳ್ಳಲಾಯಿತು.**

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದ ರೀತ್ಯಾ ಗಣಕೀಕರಿಸಲಾಯ್ತು)

ಓದಿ ಹೇಳಿ ಕೇಳಿ ಸರಿ ಇದೆ

ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು

ಜೆಎಂಎಫ್‌ಸಿ, ಸಾಗರ